ಎಂ ವಿ ಸಿ ನಂಃ 35/2023

ಆರ್ ಡಬ್ಲ್ಯೂ-2

**(ಇಂದು ದಿನಾಂಕ 19-02-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಮಾಡಿಸಲಾಯಿತು)**

**ಮುಖ್ಯವಿಚಾರಣೆಃ ಎದುರುದಾರರ ಪರ ವಕೀಲರಿಂದ**

ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ವಿಷಯಗಳು ಸತ್ಯವಾಗಿರುತ್ತವೆ .

ನಾನು ಈ ಅರ್ಜಿಯಲ್ಲಿ ಹಾಜರುಪಡಿಸಿರುವ ದಾಖಲೆಗಳನ್ನು ನೋಡಿದರೆ ಗುರುತಿಸುತ್ತೇನೆ . ಸಾಕ್ಷಿಯ ಗುರುತಿಸಿದ ದಾಖಲೆಗಳನ್ನು ಈ ಕೆಳಕಂಡಂತೆ ಗುರುತಿಸಲಾಯಿತು .

| **ಕ್ರ ಸಂ.** | **ದಾಖಲೆಗಳ ನಮೂನೆ** | **ನಿಶಾನೆ** |
|---|---|---|
| 1 | ಅಧಿಕಾರ ಪತ್ರ | ನಿಆರ್-1 |
| 2 | ವಿಮಾ ಪತ್ರದ ದೃಡಿಕೃತ ಪ್ರತಿ | ನಿಆರ್-2 |

**ಪಾಟೀಸವಾಲುಃ ಅರ್ಜಿದಾರರ ಪರ ವಕೀಲರಿಂದ**

ನಾನು ನನ್ನ ಸಾಕ್ಷಿ ಪ್ರಮಾಣ ಪತ್ರ ವನ್ನು ಪೋಲಿಸ್ ದಾಖಲೆಯ ಮೇಲೆ ಆಧಾರದ ಮೇಲೆ ಹಾಕಿದ್ದೇನೆ ಎಂದರೆ ಸರಿ. ಅಪಘಾತದ ಬಗ್ಗೆ ನನಗೆ ವೈಯಕ್ತಿಕ ಮಾಹಿಡಿ ಇಲ್ಲ ಎಂದರೆ ಸಾಕ್ಷಿ ನಾನು ಪೋಲಿಸ್ ದಾಖಲೆ ಆಧಾರದ ಮೇಲೆ ಅದರ ಬಗ್ಗೆ

ಮಾಹಿತಿ ಇದೆ ಎಂದು ಹೇಳುತ್ತಾರೆ. ಅಪಘಾತವಾದ ರಸ್ತೆ ಏಕಮುಖ ರಸ್ತೆ ಎಂದರೆ ಸರಿಯಲ್ಲ. ಸದರಿ ರಸ್ತೆ ಬೆಳಗಾವ ಧಾರವಾಡ ರಸ್ತೆಯ ಏಕಮುಖ ರಸ್ತೆ ಇದೆ ಎಂದರೆ ಸಾಕ್ಷಿ ಅಕ್ಕಪಕ್ಕದ ಹಳ್ಳಿಯ ಜನರು ಸಹ ಆ ರಸ್ತೆಯನ್ನು ಉಪಯೋಗಿಸುತ್ತಾರೆ ಎಂದು ಹೇಳುತ್ತಾರೆ. ಸದರಿ ರಸ್ತೆಯಲ್ಲಿ ಬೃಹತ ಗಾತ್ರದ ವಾಹನಗಳು ಓಡಾಡಲು ಅವಕಾಶ ಇಲ್ಲ ಎಂದರೆ ನನಗೆ ಗೊತ್ತಿಲ್ಲ. ಸದರಿ ರಸ್ತೆಯ ಅಗಲ ನನಗೆ ಗೊತ್ತಿಲ್ಲ.

ಲಾರಿ ಚಾಲಕ ಧಾರವಾಡದಿಂದ ಬೆಳಗಾವ ಕಡೆ ಹೋಗುತ್ತಿದ್ದ ಎಂದರೆ ಸಾಕ್ಷಿಯು ದಾಖಲೆಗಳ ಪ್ರಕಾರ ಅದು ಸರಿ ಇದೆ. ಸದರಿ ಚಾಲಕ ರಸ್ತೆಯ ನಿಯಮಗಳನ್ನು ಉಲ್ಲಂಘನೆ ಮಾಡಿದ್ದಾನೆ ಎಂದರೆ ಸರಿಯಲ್ಲ. ಸದರಿ ಅಪಘಾತ ಚಾಲಕನ ನಿರ್ಲಕ್ಷ ಚಾಲನೆಯಿಂದ ಆಗಿದೆ ಎಂದರೆ ಸರಿಯಲ್ಲ. ಪರಿಹಾರ ಕೊಡಬೇಕಾಗುತ್ತದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆ ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓ ಹೇ ಕೇ ಸರಿ ಅದೆ ,

**( ಆನಂದ ಎಸ್ ಕರಿಯಮ್ಮನವರ್)**

4 ನೇ ಹಿ ದಿ ನ್ಯಾ ಹಾಗೂ ಜೆಎಂಎಫ್‌ಸಿ,

ಧಾರವಾಡ.